ಇಂಡಿ ಮತಕ್ಷೇತ್ರದ ಪ್ರಾಥಮಿಕ ಶಾಲೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ

682 (664) ಡಾ. ಬಗಲಿ ಸಾರ್ವಭೌಮ ಸಾತಗೌಡ (ಇಂಡಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಇಂಡಿ ವಿಧಾನ ಸಭಾ ಕ್ಷೇತ್ರದಲ್ಲಿ ಎಷ್ಟು ಪ್ರಾಥಮಿಕ ಶಾಲೆಗಳಿವೆ;

ಆ) ಯಾವ ಯಾವ ಪ್ರಾಥಮಿಕ ಶಾಲೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇದೆ; ಯಾವ ಯಾವ ಶಾಲೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದಿರುವ ಬಗ್ಗೆ ಮಾಹಿತಿ ನೀಡುವುದು;

ಇ) ಇಂಡಿ ವಿಧಾನ ಸಭಾ ಕ್ಷೇತ್ರದಲ್ಲಿ ಬರಗಾಲವಿದ್ದು, ಕುಡಿಯುವ ನೀರಿನ ತೀವ್ರ ಅಭಾವವಿದ್ದು, ಪ್ರಾಥಮಿಕ ಶಾಲೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆಗಾಗಿ ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಇಂಡಿ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 318 ಪ್ರಾಥಮಿಕ ಶಾಲೆಗಳಿವೆ.

ಆ) 312 ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿದೆ. ಉಳಿದ 6 ಶಾಲೆಗಳಾದ 1. ಕಿರಣಗಿ ವಸ್ತಿ ಅಥರ್ಗಾ, 2. ಮಳ್ಳಿ ಹಳ್ಳಿ ವಸ್ತ ತಂಬಾ, 3. ಪೂಜಾರಿ ವಸ್ತಿ ಗುಂದವಾನ ಮತ್ತು 4. ಹಿಂಗಣಿ ಜಿ.ಜಿ.ವಸ್ತಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು 5. ಡಿಗ್ಗಿಭಾವಿ ಎಲ್.ಟಿ–1, 6. ಕ್ಯಾತನಕೇರಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡಲು ಕೊಳವೆ ಭಾವಿ ಕೊರೆಸಿದ್ದರೂ ಸಹ ನೀರು ಬಂದಿಲ್ಲದ ಕಾರಣ ತಾತ್ಕಾಲಿಕ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ.

ಇ) ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಹೊಂದಿರದ ಮೇಲ್ಕಂಡ 6 ಶಾಲೆಗಳಿಗೆ ಸಮುದಾಯ ಭವನ ಹಾಗೂ ಶಾಲೆಯ ಅಕ್ಕಪಕ್ಕದ ಹೊಲದವರಿಂದ ನೀರು ಪಡೆದು ತಾತ್ಕಾಲಿಕ ವ್ಯವಸ್ಥೆ ಕಲ್ಪಿಸಲಾಗಿದೆ.